ಅಂತಾರಾಷ್ಟ್ರೀಯ ಮಹಿಳಾ ದಿನಾಚಾರಣೆ ಆಚರಣೆ

ಹುಬ್ಬಳಿ : ಸ್ಥಳೀಯ ಕೆ.ಎಲ್.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಶಿಕ್ಷಣ ವಿಭಾಗ ವಿದ್ಯಾನಗರ ಹುಬ್ಬಳ್ಳಿಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚಾರಣೆಯನ್ನು ವಿಶಿಷ್ಟವಾಗಿ ಆಚರಿಸಲಾಯಿತು.ಇದೇ ಸಂದರ್ಭದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ ಲಿಂಗರಾಜ ಸಿ ಮುಳ್ಳಳ್ಳಿ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಶಾನನ್ ಎಂಬ ೯೧ ವರ್ಷದ ಕಪ್ಪು ಮಹಿಳೆ ತನ್ನ ಶೈಕ್ಷಣಿಕ ಪದವಿಯನ್ನು ಪಡೆದಿರುವ ಕುರಿತು ಮಾರ್ಮಿಕವಾಗಿ ಹಾಗೂ ಹೆಣ್ಣಿನ ಸಾಧನೆಯ ಛಲ ಮತ್ತು ಲಿಂಗ ಸಮಾನತೆ ಬಗ್ಗೆ ತಿಳಿಸಿಕೊಟ್ಟರು. ಸುಸ್ಥಿರ ನಾಳೆಗಾಗಿ ಇಂದು ಲಿಂಗ ಸಮಾನತೆ ಎಂಬ ಘೋಷವಾಕ್ಯದ ಮೇಲೆ ಭಾಷಣ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮತ್ತು ತೀರ್ಪುಗಾರರಾಗಿ ಡಾ॥ ಜಯಶ್ರೀ. ಸಿ. ಕುಂದಗೋಳಮಠ ಕಾರ್ಯ ನಿರ್ವಹಿಸಿದರು . ಕಾರ್ಯಕ್ರಮವು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳಾದ ಮೇಘನಾ ಮಿರಜಕರ್ ಮತ್ತು ರಚನಾ ರವರ ಪ್ರಾರ್ಥನೆ ಗೀತೆಯೊಂದಿಗೆ ಪ್ರಾರಂಭವಾಯಿತು. ಭಾಷಣ ಸ್ಪರ್ಧೆಯಲ್ಲಿ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಯಾದ ಹುಲಿಗೆವ್ವ –ಪ್ರಥಮ ಸ್ಥಾನ ಪಡೆದರೆ, ಅಕ್ಷತಾ ಭಟ್ ಮತ್ತು ರಂಜಿನಿಯವರು ಅನುಕ್ರಮವಾಗಿ ೨ನೇ ಹಾಗೂ ೩ನೇ ಸ್ಥಾನ ಗಳಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಯಾದ ವೀಣಾ ಪೋಲಿಸ್ ಗೌಡರ ನೆರವೇರಿಸಿದರು. ಕೊನೆಯದಾಗಿ ವಂದನಾರ್ಪಣೆ ಕಾರ್ಯಕ್ರಮವನ್ನು ದ್ವೀತಿಯ ವರ್ಷದ ಪ್ರಶಿಕ್ಷಣಾರ್ಥಿಯಾದ ಪದ್ಮಾ ಕಾಂಬಳೆ ನೆರವೇರಿಸಿದರು. ಕಾರ್ಯಕ್ರಮಕ್ಕೆ ಪ್ರತ್ಯೇಕ್ಷ ಸಾಕ್ಷಿಯಂತೆ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.

ವಿಶ್ವ ಆರೋಗ್ಯ ದಿನ

ಕೆ.ಎಲ್.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಶಿಕ್ಷಣ ವಿಭಾಗ ವಿದ್ಯನಗರ ಹುಬ್ಬಳ್ಳಿ ಈ ಮಹಾವಿದ್ಯಾಲಯದಲ್ಲಿ ವಿಶ್ವ ಆರೋಗ್ಯ ದಿನಾಚಾರಣೆ-2022 ಆಚರಿಸುವದರೋಂದಿಗೆ ನಮ್ಮ ಗ್ರಹ ನಮ್ಮ ಆರೋಗ್ಯ ಇದರ ಅಧ್ಯಕ್ಷತೆಯನ್ನು ಮಹಾವಿದ್ಯಲಯದ ಪ್ರಾಚಾರ್ಯರಾದ ಡಾ ಲಿಂಗರಾಜ ಸಿ ಮುಳ್ಳಳ್ಳಿ ಅವರು ವಹಿಸಿಕೊಂಡಿದ್ದರು ಹಾಗು ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಸ್ಥಾನವನ್ನು ಡಾ॥ ಜಯಶ್ರೀ. ಸಿ. ಕುಂದಗೋಳಮಠ ವಹಿಸಿಕೊಂಡಿದ್ದರು ಜೊತೆಗೆ ಭಾಷಣ ಸ್ಪರ್ಧೆಯ ಮುಖ್ಯ ನ್ಯಾಯದೀಶರಾಗಿ ಕಾರ್ಯ ನಿರ್ವಹಿಸಿದ್ದರು